ಓ.ಎಸ್. ನಂಃ 175/2017
ಪಿ.ಡಬ್ಲ್ಯುಃ 01

ದಿನಾಂಕಃ 27-10-2018 ರಂದು ಮುಖ್ಯವಿಚಾರಣೆಗೆ ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ - ಶ್ರೀ ಆರ್.ಆರ್. ವಕೀಲರಿಂದ.

ಸಾಕ್ಷ್ಯ ರೂಪದಲ್ಲಿ ಹಾಜರು ಪಡಿಸಿರುವ ಪ್ರಮಾಣ ಪತ್ರದಲ್ಲಿನ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಹಾಗೂ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿದ್ದೇನೆ.

ದಾವಾ ಸ್ವತ್ತನ್ನು ನನ್ನ ತಾಯಿಯ ಹೆಸರಿನಲ್ಲಿ ಖರೀದಿಸಿದ ಮೂಲ ಕ್ರಯ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 01 ಎಂದು, ದಾವಾ ಸ್ವತ್ತಿಗೆ ಸಂಬಂಧಿಸಿದ ತಿಪ್ಪೇರುದ್ರಪ್ಪನವರ ಹೆಸರಿಗೆ ಆದ ನೋಂದಾಯಿತ ಕ್ರಯ ಕರಾರು ಪತ್ರದ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 02 ಎಂದು, ನನ್ನ ತಾಯಿಯ ಹೆಸರಿಗೆ ಹಕ್ಕು ಬದಲಾವಣೆಯಾದ ಹಕ್ಕು ಬದಲಾವಣೆ ಪ್ರತಿಯನ್ನು ನಿಪಿಃ 03 ಎಂದು, ದಾವಾ ಸ್ವತ್ತಿನ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 04 ಎಂದು, ದಾವಾ ಸ್ವತ್ತಿಗೆ ಕಂದಾಯ ಪಾವತಿ ಮಾಡಿದ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 05 ಎಂದು, ಸಣ್ಣವೀರಪ್ಪನವರ ಶಾಲಾ ದೃಢೀಕರಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 06 ಎಂದು, ಸಣ್ಣವೀರಪ್ಪನವರ ಎಪಿಎಲ್ ಪಡಿತರ ಚೀಟಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 07 ಎಂದು, ಸಣ್ಣವೀರಪ್ಪನವರ ಚುನಾವಣಾ ಗುರುತಿನ ಚೀಟಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 08 ಎಂದು ಗುರ್ತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ಆದೇಶಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ಪಾಟೀಸವಾಲು ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಸಮಯ ನೀಡಿ ಮುಂದೂಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಕೂಡ್ಲಿಗಿ.